೧

ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/05/2016-17. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಕಾತ್ರಿಕೆ ನಾಗಮ್ಮ ಗಂಡ ಕಾತ್ರಿಕೆ ಬೋಸಪ್ಪ<br>2)ಕಾತ್ರಿಕರ ಬೋಸಪ್ಪ ತಂದೆ ಲೇಟ್ ಕಾತ್ರಿಕೆ ಕರಿಯಪ್ಪ<br>ಕೆಂಚಮಲ್ಲನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 212ಬಿ/5. ವಿಸ್ತೀರ್ಣ 2-00. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 212ಬಿ/5. ವಿಸ್ತೀರ್ಣ 2-00 ಎಕ್ರೆ ಜಮೀನನ್ನು .ಸದರಿ ಗ್ರಾಮದ ಕಾತ್ರಿಕೆ ನಾಗಮ್ಮ ಗಂಡ ಬೋಸಪ್ಪ ಇವರು ದಿನಾಂಕ 26-042015 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 15-08-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಪಾಲು ವಿಭಾಗದ ಪತ್ರ ನೊಂದಣಿ ಇಲ್ಲದ ಕಾರಣ ಹಾಗು ಪಟ್ಟದಾರನ ಹೆಂಡತಿ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 03/2015-16. ದಿನಾಂಕ 16-09-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 30-05-2016 ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 212ಬಿ/5. ವಿಸ್ತೀರ್ಣ 2-00 ಎಕ್ರೆ ಜಮೀನು ನನ್ನ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ನಾನು ನನ್ನ ಸ್ವ ಇಚ್ಚೇಯಿಂದ ಹಾಗೂ ಖುದ್ದು ರಾಜಿಯಿಂದ ನನ್ನ ದರ್ಮ ಪತ್ನಿಯಾದ ನಾಗಮ್ಮ ಇವರ ಹೆಸರಲ್ಲಿ ದಿನಾಂಕ 26-04-2015 ರಂದು ಪಾಲು ವಿಭಾಗ ಪತ್ರ ಬರೆಯಿಸಿರುತ್ತೇನೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಪಹಣಿಯ ಲೆಕ್ಕ ದಾಖಲೆಯಲ್ಲಿ ಖಾತಾ ಬದಲಾವಣೆ ಮಾಡಲು ನನ್ನ ಸಂಪೂರ್ಣ ಒಪ್ಪಿಗೆ ಇರುತ್ತದೆಯೇಂದು ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಈ ಕೆಳಗಿನಂತೆ ಈ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 212ಬಿ/5. ವಿಸ್ತೀರ್ಣ 2-00 ಎಕ್ರೆ ಜಮೀನಿನ ದಿನಾಂಕ 26-04-2015 ರ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರಾದ ನಾಗಮ್ಮ ಗಂಡ ಕಾತ್ರಿಕೆ ಬೋಸಪ್ಪ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. ಹಾಗೂ ಮುದ್ರಾಂಕ ಶುಲ್ಕ ಪಾವತಿಸಲು ಸಹಾ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ, ಹೊಸಹಳ್ಳಿ

ಉಪ ತಹಶೀಲ್ದಾರರು
ನಾಡ ಕಾರ್ಯಾಲಯ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕಾತ್ರಿಕೆ ನಾಗಮ್ಮ ಗಂಡ ಬೋಸಪ್ಪ. ಕಾತ್ರಿಕೆ ಬೋಸಪ್ಪ ತಂದೆ ಕರಿಯಪ್ಪ ಕೆಂಚಮಲ್ಲನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.